ಎಂದು ಹೇಳುವುದಕ್ಕೆ ಸರ್ವ ಪಕ್ಷಗಳ ನಿಯೋಗವನ್ನು ಕರೆದುಕೊಂಡು ಹೋಗಿ ಪ್ರಧಾನ ಮಂತ್ರಿಗಳನ್ನು ಭೇಟಿ ಮಾಡತಕ್ಕಂಥ ವ್ಯವಸ್ಥೆಯಾಗಬೇಕು. ತಾವು ಮಹಾಜನ್ ವರದಿ ಅಂತಿಮ ಎಂದು ಹೇಳಿದಿರಿ. ಅದರಲ್ಲಿ ಯಾವುದೇ ಹಿಂದುಮುಂದು ಇಲ್ಲ. ಅಂತಿಮ ಎಂದು ತಳ್ಳಿಕೊಂಡು ಹೋಗುವ ಬದಲು ಇದನ್ನು ಕಾರ್ಯಗತ ಮಾಡಿ ಎಂದು ಪ್ರಧಾನಮಂತ್ರಿಗಳಿಗೆ ಹೇಳುವುದಕ್ಕೆ ಮಾನ್ಯ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಸರ್ವಪಕ್ಷಗಳ ನಿಯೋಗ ಕರೆದುಕೊಂಡು ಹೋಗಬೇಕೆಂದು ಮಾನ್ಯ ಮುಖ್ಯಮಂತ್ರಿಗಳನ್ನು ತಮ್ಮ ಮೂಲಕ ಒತ್ತಾಯ ಮಾಡುತ್ತೇನೆ.

ಶ್ರೀ ಹೆಚ್.ಡಿ. ದೇವೇಗೌಡ : ನಾನು ಮತ್ತೊಮ್ಮೆ ಒಂದು ವಿಷಯವನ್ನು ಈ ಸಂದರ್ಭದಲ್ಲಿ ಹೇಳುವುದಕ್ಕೆ ಇಚ್ಛಿಪಡುತ್ತೇನೆ. ಈ ಸದನದ ಸಾರ್ವಭೌಮ. ಈ ಸದನ ಏನೇ ನಿರ್ಣಯ ತೆಗೆದುಕೊಂಡರು ನಾವು ಅದಕ್ಕೆ ತಲೆಬಾಗಬೇಕಾಗುತ್ತದೆ. ಇದು ನನ್ನ ವೈಯಕ್ತಿಕ ಪ್ರಶ್ನೆಯಲ್ಲ. ಇಂತಹ ವಿಷಯದಲ್ಲಿ ಪಕ್ಷದ ರಾಜಕಾರಣವನ್ನು ಬಿಟ್ಟು ಬಹಳ ಎತ್ತರದಲ್ಲಿ ಕೆಲಸ ಮಾಡಿಕೊಂಡು ಬಂದಿದ್ದೇನೆ. ಹಾಗೂ ಸರ್ವಸಮ್ಮತವಾದ ನಿಲುವನ್ನು ಅನುಸರಿಸಿಕೊಂಡು ಬಂದಿದ್ದೇನೆ ಅದರಲ್ಲಿ ವ್ಯತ್ಯಾಸವಿಲ್ಲ. ಶ್ರೀಮಾನ್ ವೀಶಪ್ಪ ಮೊಯ್ಲಿಯವರು ಹೇಳಿದಂಥ ಒಂದು ಮಾತನ್ನು ನಾನು ನಿರಾಕರಣೆ ಮಾಡುವುದಿಲ್ಲ. ನಾವೆಲ್ಲಾ ಮಾನ್ಯ ಅಧ್ಯಕ್ಷರ ಕೊಠಡಿಯಲ್ಲಿ ಕುಳಿತು ಯಾವ ರೀತಿಯಲ್ಲಿ ನಮ್ಮ ಅಭಿಪ್ರಾಯವನ್ನು ಈ ಸದನದ ಮುಖೇನ ವ್ಯಕ್ತಪಡಿಸಬೇಕು ಎನ್ನುವುದರ ಬಗ್ಗೆ ಒಂದು ಸರ್ವಸಮ್ಮತವಾದ ನಿರ್ಣಯವನ್ನು ಕೂಡ ಮಾಡಲಿಕ್ಕೆ ನಾನು ಸಿದ್ಧನಿದ್ದೇನೆ. ಈ ಸದನ ಅಪೇಕ್ಷಿಪಟ್ಟು, ಹೋಗಬೇಕು ಎನ್ನುವ ಸನ್ನಿವೇಶ ಉಂಟಾದಾಗ ಹೋಗೋಣ. ಈಗ ಅಲ್ಲ ಮೊದಲನೆ ಹಂತದಲ್ಲಲ್ಲ. ಶ್ರೀಮಾನ್ ನಂಜೇಗೌಡರು ಇದು ಮುಗಿದು ಹೋದ ಅಧ್ಯಾಯ ಎಂದು ಹೇಳಿದರು. ಅದನ್ನು ನಾನು ಒಪ್ಪಿಕೊಳ್ಳುತ್ತೇನೆ.

ಏಕೆಂದರೆ, ಒಂದು ಹಂತದಲ್ಲಿ ಕೇಂದ್ರದ ಮುಖಂಡರುಗಳೇ ಈ ಮಾತನ್ನು ಹೇಳಿದರು. ಅದನ್ನು ರಾಜಕೀಯವಾಗಿ ಬಳಸಿಕೊಂಡು ಬರುತ್ತಿದ್ದಾರೆ. ಅದರ ಬಗ್ಗೆ ಚರ್ಚೆ ಮಾಡುವುದು ಈಗ ಬೇಡ. ಈ ಸನ್ನಿವೇಶ ಉಂಟಾದಾಗ ಈ ಸದನದಿಂದ ನಿಯೋಗ ಕಳಿಸಲಿಕ್ಕೆ ಹಿಂದುಮುಂದು ನೋಡುವುದಿಲ್ಲ.

ಶ್ರೀ ವಾಟಾಳ್ ನಾಗರಾಜ್ : ಪ್ರಧಾನಮಂತ್ರಿಗಳಿಗೆ ಪತ್ರ ಬರೆಯುವುದು.

ಶ್ರೀ ಹೆಚ್.ಡಿ. ದೇವೇಗೌಡ : ಅದು ಆಗಬಹುದು.

SRI. B.I. PATIL : Sir, The law Minister told that he would disqualify us from the membership. It has gone on record. Why you want Kasargod? You must expunge those remarks of Law Minister.

MR. SPEAKER : I will get the records and examine. The discussion is closed.

6. ಚುನಾವಣಾ ಪ್ರಸ್ತಾವಗಳು

ಶ್ರೀ ಹೆಚ್.ಡಿ. ದೇವೇಗೌಡ (ಮುಖ್ಯಮಂತ್ರಿಗಳು) : ಸನ್ಮಾನ್ಯ ಅಧ್ಯಕ್ಷರೆ, ತಮ್ಮ ಅನುಮತಿಯಿಂದ ಚುನಾವಣಾ ಪ್ರಸ್ತಾವಗಳನ್ನು ಸಭೆಯ ಮುಂದೆ ಮಂಡಿಸಲಿಕ್ಕೆ ಇಚ್ಛಿಪಡುತ್ತೇನೆ.

ಅ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 265(1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಹನ್ನೆರಡು ಜನ ಸದಸ್ಯರನ್ನು ಚುನಾಯಿಸಬೇಕು;

ಆ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 268(1)ನೇ ನಿಯಮದ ಅನುಸಾರವಾಗಿ ಈ ಸಭೆ ಅಂದಾಜುಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕು;

ಇ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 271(1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಉದ್ಯಮೆಗಳ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು ಚುನಾಯಿಸಬೇಕು;

ಈ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 272(1)ನೇ ನಿಯಮದ ಅನುಸಾರವಾಗಿ ಈ ಸಭೆ ಹಕ್ಕು ಬಾಧ್ಯತಾ ಸಮಿತಿಗೆ ಏಳು ಜನ ಸದಸ್ಯರನ್ನು ಚುನಾಯಿಸಬೇಕು;

ಉ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 277(1)ನೇ ನಿಯಮದ ಅನುಸಾರವಾಗಿ ಈ ಸಭೆ ಅಧೀನ ಶಾಸನರ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸಬೇಕು;

ಊ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 282(1)ನೇ ನಿಯಮದ ಅನುಸಾರವಾಗಿ ಈ ಸಭೆ ಸರ್ಕಾರಿ ಭರವಸೆಗಳ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸಬೇಕು;

ಋ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 283(1)ನೇ ನಿಯಮದ ಅನುಸಾರವಾಗಿ ಈ ಸಭೆಯಿಂದ ಸದಸ್ಯರ ವಿಧೇಯಕಗಳ ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು ಚುನಾಯಿಸಬೇಕು;

ೠ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 286ನೇ ನಿಯಮದ ಅನುಸಾರವಾಗಿ ಈ ಸಭೆ ಅನುಸೂಚಿತ ಜಾತಿ ಹಾಗೂ ಅನುಸೂಚಿತ ವರ್ಗಗಳ ಕಲ್ಯಾಣ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು ಚುನಾಯಿಸಬೇಕು;

ಎ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 288(1)ನೇ ನಿಯಮದ ಅನುಸಾರವಾಗಿ ಈ ಸಭೆ ಹಿಂದುಳಿದ ವರ್ಗಗಳ ಕಲ್ಯಾಣ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು ಚುನಾಯಿಸಬೇಕು;

ಏ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ 270(2)ನೇ ನಿಯಮದ ಅನುಸಾರವಾಗಿ ಈ ಸಭೆ ವಸತಿ ಸೌಕರ್ಯಗಳ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸಬೇಕು;

ಐ) 1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಶಾಸನದ 21(1) (14)ನೇ ಕಲಮಿನ ಮೇರೆಗೆ ಅವಶ್ಯಪಡಿಸಿರುವಂತೆ ವಿಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಬೆಂಗಳೂರು ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಐದು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು;

ಒ) 1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಶಾಸನದ 21(1) (14)ನೇ ಕಲಮಿನ ಮೇರೆಗೆ ಅವಶ್ಯಪಡಿಸಿರುವಂತೆ ವಿಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು

ಮಂಗಳೂರು ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಐದು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು;

ಓ) 1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಶಾಸನದ 21(1) (14)ನೇ ಕಲಮಿನ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಗುಲ್ಬರ್ಗಾ ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಐದು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು;

ಔ) 1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಶಾಸನದ 21(1) (14)ನೇ ಕಲಮಿನ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಕರ್ನಾಟಕ ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಐದು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು;

ಅಂ) 1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಶಾಸನದ 21(1) (14)ನೇ ಕಲಮಿನ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಕುವೆಂಪು ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಐದು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು;

ಅಃ) 1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಶಾಸನದ 21(1) (14)ನೇ ಕಲಮಿನ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಮೈಸೂರು ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಐದು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು;

ಕ) 1991ನೇ ಇಸವಿಯ ಕನ್ನಡ ವಿಶ್ವವಿದ್ಯಾನಿಲಯಗಳ ಶಾಸನದ 19(1) ಎನ್ ಕಲಮಿನ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಕನ್ನಡ ವಿಶ್ವವಿದ್ಯಾನಿಲಯದ ಒಬ್ಬ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು;

1.10 ಪಿ.ಎಂ.

ಅಧ್ಯಕ್ಷರು : ಈಗ ಸನ್ಮಾನ್ಯ ಸಭಾ ನಾಯಕರು ನಿನ್ನೆ ದಿವಸ ಶ್ರೀಮಾನ್ ಮಲ್ಲಿಕಾರ್ಜುನ ಖರ್ಗೆಯವರು ಮತ್ತು ಶ್ರೀ ವೀರಪ್ಪ ಮೊಯ್ಲಿಯವರು ಹಾಗೂ ಇತರ ಸದಸ್ಯರು ಮಂಡಿಸಿದ್ದ ನಿಲುವಳಿ ಸೂಚನೆ ಏನು ಇತ್ತು ಸದನದ ಎಲ್ಲಾ ಕಲಾಪವನ್ನು ಮುಂದೂಡಿ ಅವರು ಪ್ರಸ್ತಾಪ ಮಾಡಿರುವ ವಿಷಯವನ್ನು ಚರ್ಚೆಗೆ ತೆಗೆದುಕೊಳ್ಳಬೇಕು ಎಂದು ಹೇಳಿದ್ದಾರೋ ಅದಕ್ಕೆ ಉತ್ತರ ಕೊಡಬೇಕು ಎಂದು ಹೇಳುತ್ತೇನೆ.

ಶ್ರೀ ಎ. ರಾಮದಾಸ್ : ಸ್ವಾಮಿ ಜೀರೋ ಅವರ್ ಇದೆಯೇ?

ಅಧ್ಯಕ್ಷರು : ಜೀರೋ ಅವರ್ ಆಗಿ ಹೋಯಿತು.

ಶ್ರೀ ಎ. ರಾಮದಾಸ್ : 3 ದಿವಸಗಳ ಕಾಲಷ್ಟಿಂದ ಮಹಿಳೆಯರ ಮೇಲೆ ನಡೆದಂಥ ವಿಚಾರಗಳನ್ನು ಹೇಳಲು 3 ದಿವಸಗಳಿಂದ ಕೇಳಿಕೊಳ್ಳುತ್ತಿದ್ದೇನೆ.

ಅಧ್ಯಕ್ಷರು : ಜೀರೋ ಅವರ್ ಮುಗಿದುಹೋಯಿತು.